ತುಮಕೂರು ಡಿಸ್ಟ್ರಿಕ್ಟ್.

ಇದರಿಂದ ಸಮಸ್ತರಿಗೂ ತಿಳಿಯಪಡಿಸುವದೇನಂದರೆ:—ಸ್ಯ 1896—97ನೇ ಸಾಲಿಗೆ (ಅಂದರೆ 1896ನೇ ಜುಲೈ ಗುರಿ) ಲಾಗಾಯತು 1897ನೇ ಜೂ 30ರ ವರಿಗೆ) ಮದ್ದಗಿರಿ ತಾಲ್ಲೂಕಿನಲ್ಲಿರುವ ಕುರಂಗದ ಕಲ್ಲು ಜಮಾಯಿಸತಕ್ಕ ಹಕ್ಕನ್ನ ಮದ್ದಗಿರಿ ತಾಲ್ಲೂಕು ಕಚೇರಿಯಲ್ಲಿ 1896ನೇ ಡಿಸೆಂಬರ್ 28ನೇ ತಾರೀಖಿನ ಬೆಳಿಗ್ಗೆ 11 ಘಂಟೆಗೆ ಹರಾಜು ಮೂಲಕ ವಿಕ್ರಯಿಸಲ್ಪಡುತ್ತೆ.

2. ಅಮಲ್ದಾರು ಅಥವಾ ಶಿರಸ್ತೇದಾರು ಹರಾಜು ಮಾಡಿಸುತ್ತಾರೆ..

3. ಛಡಸವಾಲ್ ಅಂಗೀಕರಿಸತಕ್ಕದ್ದು ತುಮಕೂರ ಡಿಸ್ಟ್ರಿಕ್ಟ್ ಡೆಪ್ಯುಟಿ ಕಮ್ಮಿಷನರ ಸಾಹೆಬರವರ ಮಂಜೂರಾತಿಗೆ ಒಳಪಟ್ಟಿರುತ್ತೆ.

4. ಹರಾಜು ಕಾಲದಲ್ಲಿ ಸವಾಲ್ ಮಾಡತಕ್ಕವರು ತಮ್ಮ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೋ ಅಥವಾ ಏಜಂಟರಾಗಿ ಸವಾಲ್ ಮಾಡುತ್ತಾರೋ ಆ ಸಂಗತಿಯನ್ನು ತಿಳಿಸಬೇಕು. ಏಜಂಟರಾಗಿ ಸವಾಲ್ ಮಾಡುವದಾದರೆ ತಾವು ಯಾರಿಗೋಸ್ಕರ ಸವಾಲ್ ಮಾಡುತ್ತಾರೋ ಅವರಿಂದ ಪಡದಿರುವ ಅಧಿಕಾರ ಪತ್ರಿಕೆಯನ್ನು ಹಾಜರ್ ಮಾಡಬೇಕು; ಹಾಗೆ ಮಾಡಲು ತಪ್ಪಿದರೆ ಅವರ ಸವಾಲ್ ತಿರಸ್ಕರಿಸಲ್ಪಡುತ್ತೆ.

5. ಛಡಸವಾಲ್ದಾರರು ಹರಾಜು ಕಾಲದಲ್ಲಿ ತಮ್ಮ ಸವಾಲ್ ಮೊಬಲಗು ಪೈಕಿ ಶೇಕಡಾ 25 ರೂಪಾಯಿಗಳ ಮೇರೆ ಡಿಪಾಜಿಟ್ ಮಾಡಬೇಕಲ್ಲದೆ ಹರಾಜು ಮಂಜೂರ ಮಾಡಲ್ಪಟ್ಟ ಸಂಗತಿ ಅಮಲ್ದಾರರಿಂದ ಛಡಸವಾಲ್ದಾರರಿಗೆ ತಿಳಿಸಲ್ಪಟ್ಟು ತಾರೀಖು ಲಾಗಾಯತು 7 ದಿವಸಗಳೊಳಗಾಗಿ ಛಡಸವಾಲ್ ಮೊಬಲಗಿನ ಮೇಲೆ ರೂಪಾಯಿ 1ಕ್ಕೆ 1 ಆಣೆಯಂತಾಗುವ ಲೋಕಲ್‌ಸೆಸ್ ದೇಖೀಲ್ ಛಡಸವಾಲ್ ಮೊಬಲಗನ್ನ ಪಾವತಿ ಮಾಡದಿದ್ದರೆ ಹಾಗೆ ಯಿಟ್ಟ ಡಿಪಾಜಿಟ್ ಮೊಬಲಗು ಸರಕಾರಕ್ಕೆ ದಂಡವಾಗಿ ತೆಗದುಕೊಳ್ಳಲ್ಪಡುತ್ತೆ. ಹಾಗೆ ಡಿಪಾಜಿಟ್ ಮೊಬಲಗು ಹಾಜರ್ ಮಾಡದಿದ್ದರೂ ಅಥವಾ ಬಾಕಿ ಮೊಬಲಗು ಪಾವತಿ ಮಾಡದಿದ್ದರೂ ಸದರೀ ಹಕ್ಕುದಾರಿಯು ಛಡಸವಾಲ್ದಾರನ ಖರ್ಚಿಗೂ ಮತ್ತು ಲುಕ್ಸಾನಿಗೂ ಒಳಪಟ್ಟು ಪುನಹ ವಿಕ್ರಯಿಸಲ್ಪಡುತ್ತೆ.

6. ಇಜಾರೆದಾರು ಹಿಡುವಳಿ ಜಮೀನುಗಳಲ್ಲಿರತಕ್ಕ ಕುರಂಗದ ಕಲ್ಲುಗಳನ್ನ ಆಯಾ ಹಿಡುವಳಿದಾರ ಅನುಮತಿ ವಿನಹ ಆರಿಸಿಕೊಳ್ಳಕೂಡದು. ಮತ್ತು ಹಿಡುವಳಿದಾರು ತಮ್ಮ ಜಮೀನುಗಳಲ್ಲಿರತಕ್ಕ ಕುರಂಗದ ಕಲ್ಲುಗಳನ್ನ ತಾವೇ ಆರಿಸಿಕೊಳ್ಳಕೂಡದು. ಅಥವಾ ಇಜಾರೆದಾರು ವಿನಹ ಇತರರಿಗೆ ಮಾರಲೂ ಕೂಡದು.

7. ಇಜಾರೆದಾರು ಹುಲ್ಲುಬನ್ನಿಯ ಯಾ ಹುಲ್ಲುಗಾವಲ್ ಇಜಾರೆದಾರ ಹಕ್ಕಿಗೆ ಆತಂಕ ಪಡಿಸಕೂಡದು.

8. ಹಿಡುವಳಿಯಲ್ಲಿ ಇಲ್ಲದ ಜಮೀನುಗಳನ್ನ ಸರಕಾರದವರು ಸಾಗುವಳಿಗೆ ಕೊಡತಕ್ಕ ವಿಷಯದಲ್ಲಿ ಇಜಾರೆದಾರ ಅಭ್ಯಂತರವೇನು ಇರುವದಿಲ್ಲ. ಪರಂತು ಅಂಥಾ ಜಮೀನುಗಳಲ್ಲಿ ಸಿಕ್ಕುವ ಕುರಂಗದ ಕಲ್ಲುಗಳನ್ನ ತೆಗದುಕೊಳ್ಳಲು ಅವರಿಗೆ ಹಕ್ಕು ಇರುತ್ತೆ.

9. ಕಲ್ಲುಗಳನ್ನು ಜಮಾಯಿಸುವದಕ್ಕಾಗಿ ಜಮೀನುಗಳನ್ನ ಇಜಾರೆದಾರು ಅಗಿಯಕೂಡದು. ಬಂದು ವೇಳೆ ಅಗಿದರೂ ಸಾಗುವಳಿಗೆ ಅನುಕೂಲಿಸುವ ಹಾಗೆ ಗುಣಿಗಳನ್ನು ಮುಚ್ಚಿ ಸರಿಪಡಿಸಬೇಕು.

10. ಕಲ್ಲುಗಳು ಜಮಾಯಿಸಲ್ಪಟ್ಟ ಗ್ರಾಮ, ಯಿಪ್ಪ್ಪತ್ತು ಮಣ ಕಲ್ಲುಗಳು ಮತ್ತು ಅದು ರಫ್ತಾಗತಕ್ಕ ಸ್ಥಳ ಈ ತಪ್ಪಿಲ್‌ಗಳು ನಮೂದು ಕಂಡು ಆಯಾ ತಾಲ್ಲೂಕು ಅಮಲ್ದಾರಿಂದ ಪಾಸು ಲೈಸೆನ್ಸನ್ನು ಪಡಿಯದೆ ಕಲ್ಲುಗಳನ್ನು ಇಜಾರೇದಾರು ಸಾಗಿಸಕೂಡದು.

ಎಂ. ನಾರಾಯಣರಾವ್,
ಡೆಪ್ಯುಟಿ ಕಮ್ಮಿಷನರ್.

ಶಿವಮೊಗ್ಗ ಡಿಸ್ಟ್ರಿಕ್ಟ್.

ಛಡಸ್ತ್ ಇಲಾಖಾ.

ನೋಟಿಫಿಕೇಷನ್.

ಸ್ಯ 1878ನೇ ಇನವಿ ಫಾರೆಸ್ಟ್ ರೂಲ್ಸ್ 37ನೇ ಸೆಕ್ಷನ್ ಅನುಸರಿಸಿ ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೆನಂದರೆ,—ಶಿವಮೊಗ್ಗ ಡಿಸ್ಟ್ರಿಕ್ಟ್ ಶಿವಮೊಗ್ಗ ತಾಲ್ಲೂಕು ಬೆಂಕಿಪುರದ ಟ್ರಾವೆಲರ್ಸ್ ಬಂಗ್ಲೆ ಬಳಿ ಭದ್ರಾನದಿಯಲ್ಲಿ ಈ ಕೆಳಗೆ ನಮೂದಿಸಿರುವ ನಾಟೂ ತೇಲಿಬಂದು ಸಿಕ್ಕಿ ಇರುತ್ತೆ.

ಮೇಲ್ಕಂಡ ನಾಟೂಕ್ಕೆ ಹಕ್ಕು ಪುಳ್ಳವರು ಈ ಸ್ತಿಹಾರ್ ತಾರೀಖು ಲಾಗಾಯತು ಎರಡು ತಿಂಗಳ ವಳಗಾಗಿ ಶಿವಮೊಗ್ಗ ಡಿಸ್ಟ್ರಿಕ್ಟ್ ಡೆಪ್ಯುಟಿ ಕ್ಷನರವೇಟರವರ ರೂಬರೂ ಖುದ್ದಾಗಿ ಆಗಲಿ ಅಥವಾ ಕ್ರಮವಾಗಿ ಅಧಿಕಾರ ಪಡೆದ ಮುಖ್ತಾರೀಕನ ಮೂಲಕವಾಗಲಿ ಹಾಜರಾಗಿ ತಮ್ಮ ಹಕ್ಕನ್ನು ಸ್ಥಿರಪಡಿಸಿಕೊಳ್ಳಬೇಕು. ಆ ತಾರೀಖಿನ ನಂತರ ಬರುವ ಹಕ್ಕುದಾರಿಯನ್ನು ಅಂಗೀಕರಿಸದೆ ಸರಕಾರದ ತರಫಿ ಸದರೀ ನಾಟೂವನ್ನು ಹರಾಜು ಮಾಡಲ್ಪಡುವದು.

ನಾಟೂ ತಪಸೀಲ್.

ನಂಬರ್.	ಜಾತಿ.	ಉದ್ದ ಲಾಂಬಿ ಅಡಿ.	ಸುತ್ತಳತೆ ಅಡಿ.	ಷರಾ.
1	ಸಾಗುವಾನಿ ನಾಟೂ ..	14 ಅಡಿ, 4 ಅಂಗುಲ	7 ಅಡಿ, 8 ಅಂಗುಲ	